**All India Radio: Bangalore**
**Regional Bulletin In Kannada**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**11.04.2026 / 6.40 p.m.**
**<><><><>**

ಮುಖ್ಯಾಂಶಗಳು

೧. ಪ್ರಧಾನಿ ನರೇಂದ್ರ ಮೋದಿ ಇದೇ ೧೫ರಂದು ಮಂಡ್ಯ ಜಿಲ್ಲೆಯ ಆದಿಚುಂಚನಗಿರಿ ಮಹಾಸಂಸ್ಥಾನಕ್ಕೆ ಭೇಟಿ ; ಹಲವು ಕಾರ್ಯಕ್ರಮಗಳಲ್ಲಿ ಭಾಗಿ

೨. ಭಾರತದ ಇತಿಹಾಸದಲ್ಲೇ ಪ್ರಥಮ ಬಾರಿಗೆ ೫೫ ಗಿಗಾವ್ಯಾಟ್ ವಿದ್ಯುತ್ ಉತ್ಪಾದನೆ ಹೆಚ್ಚಳ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

೩. ಪತ್ರಕರ್ತರು ಸಮಾಜ ಸುಧಾರಣೆಗೆ ಒತ್ತು ನೀಡಬೇಕು - ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ

೪. ರೈತರ ಪಂಪ್‌ಸೆಟ್‌ಗಳಿಗೆ ಏಳು ತಾಸು ವಿದ್ಯುತ್ ಪೂರೈಕೆಗೆ ಕ್ರಮ - ಸಚಿವ ಶಿವಾನಂದ ಪಾಟೀಲ್

೫. ಐಎಸ್‌ಒ ಮಾನ್ಯತೆ ಪಡೆದ ಬೆಂಗಳೂರಿನ ಸಿಎಆರ್‌ಐ ಸಂಸ್ಥೆ ; ಕೇಂದ್ರ ಸಚಿವ ಪ್ರತಾಪ್ ರಾವ್ ಜಾಧವ್ ಶ್ಲಾಘನೆ

<><><><><><><>

ಪ್ರಧಾನಿ ನರೇಂದ್ರ ಮೋದಿ ಇದೇ ೧೫ರಂದು ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ಆದಿಚುಂಚನಗಿರಿ ಮಹಾಸಂಸ್ಥಾನ ಮಠಕ್ಕೆ ಭೇಟಿ ನೀಡಲಿದ್ದಾರೆ. ಮಠದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಗುರು ಭೈರವೈಕ್ಯ ಮಂದಿರ ಲೋಕಾರ್ಪಣೆಗೊಳಿಸಲಿದ್ದು, ವಿಗ್ರಹ ಪ್ರಾಣ ಪ್ರತಿಷ್ಠಾಪನಾ ಕಾರ್ಯಕ್ರಮವನ್ನು ನೆರವೇರಿಸಲಿದ್ದಾರೆ. ಬಳಿಕ ಬಿಜಿಎಸ್ ಕ್ರೀಡಾಂಗಣದಲ್ಲಿ ಬೃಹತ್ ವೇದಿಕೆ ಕಾರ್ಯಕ್ರಮ ಆಯೋಜಿಸಲಾಗಿದೆ. ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಅಧಿಕಾರಿಗಳ ತುರ್ತು ಸಭೆ ನಡೆಸಿದ ಜಿಲ್ಲಾಧಿಕಾರಿ ಡಾ. ಕುಮಾರ, ಭದ್ರತೆ, ಶಿಷ್ಟಾಚಾರ ಮತ್ತು ಸಾರ್ವಜನಿಕ ವ್ಯವಸ್ಥೆಗಳ ಕುರಿತು ಸಲಹೆ, ಸೂಚನೆ ನೀಡಿದರು.

<><><><><><><>

ಭಾರತದ ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ೫೫ ಗಿಗಾವ್ಯಾಟ್ ವಿದ್ಯುತ್ ಉತ್ಪಾದನೆ ಹೆಚ್ಚಳವಾಗಿರುವುದಾಗಿ ಕೇಂದ್ರ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಧಾರವಾಡದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೨೦೧೪ರಲ್ಲಿ ೨೫೦ ಗಿಗಾವ್ಯಾಟ್ ಸಾಮರ್ಥ್ಯ ಹೊಂದಿದ್ದ ಭಾರತದ ವಿದ್ಯುತ್ ಉತ್ಪಾದನೆ ಪ್ರಸ್ತುತ ಶೇಕಡ ೨೦ರಷ್ಟು ಹೆಚ್ಚಳವಾಗಿದೆ ಎಂದು ತಿಳಿಸಿದ್ದಾರೆ.

ಧ್ವನಿ: ಪ್ರಲ್ಹಾದ್ ಜೋಶಿ ( 30 ಸೆಕೆಂಡ್‌ಗಳು)

<><><><><><><>

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಮತ್ತು ಬೀದರ್ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಆಯೋಜಿಸಿದ್ದ ೪೦ನೇ ರಾಜ್ಯ ಪತ್ರಕರ್ತರ ಸಮ್ಮೇಳನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಚಾಲನೆ ನೀಡಿದರು.  ಬಳಿಕ ಮಾತನಾಡಿದ ಅವರು, ಊಹಾ ಪತ್ರಿಕೋದ್ಯಮ ಅತ್ಯಂತ ಅಪಾಯಕಾರಿಯಾದದ್ದು, ಪತ್ರಕರ್ತರು ಕೇವಲ ಮಾಹಿತಿ ಕೊಡುವವರಾಗದೆ, ಸಮಾಜ ಸುಧಾರಣೆಗೂ ಒತ್ತು ನೀಡಬೇಕು ಎಂದರು. ಅಂಬೇಡ್ಕರ್ ಅವರ ಆಶಯದಂತೆ ಎಲ್ಲರಿಗೂ ಆರ್ಥಿಕ, ಸಾಮಾಜಿಕ ಶಕ್ತಿ ಕೊಡುವ ಕೆಲಸವನ್ನು ಕಾಂಗ್ರೆಸ್ ಸರ್ಕಾರ ಮುಂದುವರೆಸಿದೆ. ಬಡವರ ಪರವಾದ ಆರ್ಥಿಕತೆಯನ್ನು ಪಾಲುಸುತ್ತಿದ್ದೇವೆ ಎಂದು ತಿಳಿಸಿದರು. ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ನಿಯಮಗಳಲ್ಲಿ ತೊಂದರೆ ಬಗ್ಗೆ ಚರ್ಚಿಸಿ ನಿವಾರಣೆಗೊಳಿಸಲಾಗುವುದು ಎಂದು ಭರವಸೆ ನೀಡಿದರು.

<><><><><><><>

ಮೈಸೂರಿನ ಅಶೋಕಪುರಂ ರೈಲು ನಿಲ್ದಾಣದ ಹೆಸರನ್ನು ಬದಲಾಯಿಸುವ ಯಾವುದೇ ಪ್ರಸ್ತಾವನೆ ರೈಲ್ವೆ ಇಲಾಖೆಯ ಮುಂದಿಲ್ಲ ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಸ್ಪಷ್ಟಪಡಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಅವರು ಮಾಹಿತಿ ಹಂಚಿಕೊಂಡಿದ್ದು, ಮೈಸೂರು ಭೇಟಿ ವೇಳೆ ಮಾಜಿ ಸಂಸದ ಪ್ರತಾಪ್ ಸಿಂಹ, ಅಮೃತ್ ಭಾರತ್ ನಿಲ್ದಾಣ ಯೋಜನೆಯಡಿ ಅಶೋಕಪುರಂ ರೈಲು ನಿಲ್ದಾಣದ ಅಭಿವೃದ್ಧಿ ಕೈಗೊಳ್ಳುವಂತೆ ಮನವಿ ಸಲ್ಲಿಸಿದ್ದು, ಈ ಕುರಿತು ಪರಿಶೀಲಿಸುವ ಭರವಸೆ ನೀಡಿರುವುದಾಗಿ ತಿಳಿಸಿದ್ದಾರೆ.

<><><><><><><>

ರೈತರ ಪಂಪಸೆಟ್‌ಗಳಿಗೆ ಏಳು ತಾಸು ವಿದ್ಯುತ್ ಪೂರೈಕೆ ಅಗತ್ಯ ಕ್ರಮ ವಹಿಸಲಾಗುವುದು ಎಂದು ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ್ ರೈತರಿಗೆ ಭರವಸೆ

ನೀಡಿದ್ದಾರೆ. ಹಾವೇರಿಯಲ್ಲಿಂದು ಮಾತನಾಡಿದ ಅವರು, ಸರ್ಕಾರ ರೈತರ ಪರವಾಗಿದ್ದು, ರೈತರ ಪಂಪಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು. ಜಿಲ್ಲೆಯಲ್ಲಿ ಹಲವು ವಿದ್ಯುತ್ ಕೇಂದ್ರಗಳನ್ನು ಉನ್ನತಿಕರಿಸಲಾಗಿದ್ದು, ಬರುವ ದಿನಗಳಲ್ಲಿ ಇನ್ನೂ ಕೆಲವು ಕೇಂದ್ರಗಳನ್ನು ಉನ್ನತಿಕರಿಸಲಾಗುತ್ತದೆ. ಜೊತೆಗೆ ವಿದ್ಯುತ್ ಪರಿವರ್ತಕಗಳ ಬದಲಾವಣೆಗೆ ಅಗತ್ಯ ಕ್ರಮಕೈಗೊಳ್ಳಲಾಗಿದೆ ಎಂದರು.

<><><><><><><>

ಬೆಂಗಳೂರಿನ ಕೇಂದ್ರ ಆಯುರ್ವೇದ ಸಂಶೋಧನಾ ಸಂಸ್ಥೆಯ ಕ್ಲಿನಿಕಲ್ ಲ್ಯಾಬೊರೇಟರಿಯು ಜೈವಿಕ ರಸಾಯನಶಾಸ್ತ್ರ ಮತ್ತು ಹೆಮೆಟಾಲಜಿ ವಿಭಾಗಗಳಲ್ಲಿ -ಐಎಸ್‌ಒ ಮಾನ್ಯತೆ ಪಡೆದುಕೊಂಡಿದೆ. ಕೇಂದ್ರ ಆಯುರ್ವೇದ ವಿಜ್ಞಾನ ಸಂಶೋಧನಾ ಮಂಡಳಿ ಅಡಿಯಲ್ಲಿ ಈ ಮೈಲಿಗಲ್ಲು ಸಾಧಿಸಿದ ಮೊದಲ ಸಂಸ್ಥೆ ಎಂಬ ಹೆಗ್ಗಳಿಕೆಗೆ ಇದು ಪಾತ್ರವಾಗಿದೆ. ರೋಗ ನಿರ್ಣಯ ಸೇವೆಗಳಲ್ಲಿ ನಿಖರತೆ, ವಿಶ್ವಾಸಾರ್ಹತೆ ಮತ್ತು ಸುರಕ್ಷತೆಗಾಗಿ ಜಾಗತಿಕವಾಗಿ ಅಂಗೀಕರಿಸಲ್ಪಟ್ಟ ಮಾನದಂಡಗಳನ್ನು ಪ್ರಯೋಗಾಲಯ ಪೂರೈಸಿದೆ ಎಂಬುದನ್ನು ಈ ಮಾನ್ಯತೆ ಪ್ರಮಾಣೀಕರಿಸುತ್ತದೆ. ಇದು ಅಂತಾರಾಷ್ಟ್ರೀಯ ಮಾನ್ಯತೆ ಮತ್ತು ನಿಖರವಾದ ರೋಗ ನಿರ್ಣಯ ಖಾತರಿಯೊಂದಿಗೆ ಆಯುಷ್ ವ್ಯವಸ್ಥೆಯ ಗುಣಮಟ್ಟವನ್ನು ಗುರುತಿಸುತ್ತದೆ ಎಂದು ಆಯುಷ್ ಸಚಿವಾಲಯದ ರಾಜ್ಯ ಸಚಿವ ಪ್ರತಾಪ್ ರಾವ್ ಜಾಧವ್ ಹೇಳಿದ್ದಾರೆ.

<><><><><><><>

ಕಳೆದ ಒಂದು ವರ್ಷದಿಂದ ರಾಜ್ಯ ಸರ್ಕಾರದ ಆರ್ಥಿಕ ಬೆಂಬಲದಿಂದ ಪುನರ್ ಆರಂಭಗೊಂಡಿರುವ ಬೀದರ್-ಬೆಂಗಳೂರು ನಾಗರಿಕ ವಿಮಾನಯಾನ ಸೇವೆಯನ್ನು ಮುಂದುವರೆಸುವಂತೆ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ, ಮುಖ್ಯಮಂತ್ರಿಯವರಿಗೆ ಮನವಿ ಮಾಡಿದ್ದಾರೆ. ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಮಾತನಾಡಿದ ಅವರು, ಕಳೆದ ವರ್ಷ ಏಪ್ರಿಲ್ ೧ ರಂದು ಪುನರಾರಂಭಗೊಂಡ ಸೇವೆಯನ್ನು ಮುಂದವರಿಸಬೇಕು ಎಂದರು. ಭಾರತದಲ್ಲಿ ಪ್ರಜಾಪ್ರಭುತ್ವ ಗಟ್ಟಿಯಾಗಿ ನಿಲ್ಲುವಲ್ಲಿ ಮಾಧ್ಯಮಗಳ ಪಾತ್ರ ಅನನ್ಯವಾಗಿದ್ದು, ಧಾವಂತದಲ್ಲಿ ತಪ್ಪು ಮಾಹಿತಿ ಪ್ರಸಾರವಾಗದಂತೆ ಸ್ವಯಂ ನಿಯಂತ್ರಣ ಅಗತ್ಯವಾಗಿದೆ ಎಂದರು.

<><><><><><><>

ರಾಷ್ಟ್ರೀಯ ಜನಗಣತಿ ಕುರಿತು ರಾಜ್ಯದ ಹಲವೆಡೆ ಜನರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಬಳ್ಳಾರಿ ಜಿಲ್ಲೆ ಹೊಸಪೇಟೆ ನಗರ ಸಭೆಯ ವತಿಯಿಂದ ಜನರಿಗೆ ಕರಪತ್ರ ಹಂಚುವ ಮೂಲಕ ಅರಿವು ಮೂಡಿಸಲಾಯಿತು. ಇದೇ ವೇಳೆ ಹೊಸಪೇಟೆ ನಗರಸಭೆಯ ಪೌರಾಯುಕ್ತರಾದ ಎರಗುಡಿ ಶಿವಕುಮಾರ್ ಮಾತನಾಡಿ ಏಪ್ರಿಲ್ ಒಂದರಿಂದ ಜನಗಣತಿ ಆರಂಭವಾಗಿದ್ದು ಏಪ್ರಿಲ್ ೧೫ ರವರೆಗೆ ಸ್ವಯಂ ನೋಂದಣಿಗೆ ಅವಕಾಶವಿದೆ ಹಾಗಾಗಿ ಸಾರ್ವಜನಿಕರು ಮೊಬೈಲ್ ಆಪ್ ಬಳಸಿ ಸ್ವಯಂ ನೋಂದಣಿ ಮಾಡಿಕೊಳ್ಳಿ ಎಂದು ಮನವಿ ಮಾಡಿದರು. ೧೫ ವರ್ಷಗಳ ನಂತರ ಜನಗಣತಿ ನಡೆಯುತ್ತಿರುವುದರಿಂದ ಇದು ಹೆಚ್ಚಿನ ಮಹತ್ವ ಪಡೆದುಕೊಂಡಿದೆ ಹಾಗಾಗಿ ಸಾರ್ವಜನಿಕರು ಗಣತಿ ದಾರರಿಗೆ ಸರಿಯಾದ ಮತ್ತು ನಿಖರ ಮಾಹಿತಿ ನೀಡಬೇಕೆಂದು ತಿಳಿಸಿದರು.

<><><><><><><>

ಮಂಗಳೂರು ಮಹಾನಗರ ಪಾಲಿಕೆ ೨೦೨೫-೨೬ನೇ ಸಾಲಿನಲ್ಲಿ ಆಸ್ತಿ ತೆರಿಗೆ ಸಂಗ್ರಹದಲ್ಲಿ ೧೪೯.೬೮ ಕೋಟಿ ರೂಪಾಯಿ ತೆರಿಗೆ ಸಂಗ್ರಹಿಸಿದೆ ಎಂದು ಪಾಲಿಕೆ ಆಯುಕ್ತ ರವಿಚಂದ್ರ ನಾಯಕ್ ತಿಳಿಸಿದ್ದಾರೆ. ಒಟ್ಟು ೧೧೨ ಕೋಟಿ ರೂಪಾಯಿ ಗುರಿ ನಿಗದಿ ಮಾಡಲಾಗಿತ್ತು. ಇದನ್ನು ಮೀರಿ ತೆರಿಗೆ ಸಂಗ್ರಹವಾಗಿದೆ. ವರ್ಷದಿಂದ ವರ್ಷಕ್ಕೆ ತೆರಿಗೆ ಸಂಗ್ರಹದಲ್ಲಿ ಗಣನೀಯವಾಗಿ ಏರಿಕೆ ಕಾಣುತ್ತಿದೆ ಎಂದು ಅವರು ಮಾಹಿತಿ ನೀಡಿದ್ದಾರೆ. ಪಾಲಿಕೆ ವ್ಯಾಪ್ತಿಯಲ್ಲಿ ಇನ್ನು ಮುಂದೆ ಜಾಹಿರಾತು ಫಲಕ ಹಾಕಬೇಕಾದರೆ ಕ್ಯೂಆರ್ ಕೋಡ್ ಅಳವಡಿಸಲಾಗುವುದು. ಹೊಸ ಸಾಫ್ಟ್‌ವೇರ್ ಮೂಲಕ ಕ್ಯೂಆರ್ ಕೋಡ್ ಅಳವಡಿಸುವುದರಿಂದ ಅನಧಿಕೃತ ಜಾಹಿರಾತು ನಿರ್ಬಂಧಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

<><><><><><><>

ಚಾಮರಾಜನಗರ ತಾಲೂಕಿನ ಆಲೂರಿನಲ್ಲಿರುವ ಮಾಜಿ ರಾಜ್ಯಪಾಲರಾದ ಬಿ. ರಾಚಯ್ಯ ಚಿರಶಾಂತಿಧಾಮದಿಂದ ಬೆಂಗಳೂರಿನ ವಿಧಾನಸೌಧದ ಮುಂಭಾಗದಲ್ಲಿರುವ ಡಾ. ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆವರೆಗೆ ನಡೆಯುವ ನಾಲ್ಕು ದಿನಗಳ ಜೈ ಸಂವಿಧಾನ ಜಾಗೃತಿ ಅಭಿಯಾನ- ಸೈಕಲ್ ರ್‍ಯಾಲಿಗೆ ಶಾಸಕ ಎ.ಆರ್.ಕೃಷ್ಣಮೂರ್ತಿ ಇಂದು ಚಾಲನೆ ನೀಡಿದ್ದಾರೆ. ಕೋಲಾರದ ಅಂತಾರಾಷ್ಟ್ರೀಯ ಕ್ರೀಡಾಪಟು ಬೀರಮಾರನಹಳ್ಳಿ ಶ್ರೀನಿವಾಸ್ ನೇತೃತ್ವದಲ್ಲಿ ಮೈಸೂರು, ಮಂಡ್ಯ, ರಾಮನಗರ ಮಾರ್ಗವಾಗಿ ಇದೇ ೧೪ರವರೆಗೆ ಅಂಬೇಡ್ಕರ್ ಜಯಂತಿ ದಿನದಂದು ಬೆಂಗಳೂರಿಗೆ ತಲುಪಲಿದೆ. ಸಂವಿಧಾನ ಸಂಪೂರ್ಣವಾಗಿ ಜಾರಿಗೊಂಡರೆ ಸಮ ಸಮಾಜ ನಿರ್ಮಾಣವಾಗಲಿದೆ, ಒಳ ಮೀಸಲಾತಿ ಅನುಷ್ಠಾನದ ಸಂದರ್ಭದಲ್ಲಿ ಕೆಲವು

ನ್ಯೂನತೆಗಳು ಆಗಿದ್ದು, ಇದನ್ನು ಸರಿಪಡಿಸಿ ಎಲ್ಲಾ ವರ್ಗಕ್ಕೂ ನ್ಯಾಯ ಕೊಡಿಸಲು ಮುಖ್ಯಮಂತ್ರಿ ಮುಂದಾಗಲಿದ್ದಾರೆ ಎಂದು ಶಾಸಕ ಎ.ಆರ್.ಕೃಷ್ಣಮೂರ್ತಿ ತಿಳಿಸಿದ್ದಾರೆ.

<><><><><><><>

ಬೆಂಗಳೂರಿನ ಬಿಡದಿಯ ಟೊಯೊಟಾ ತಾಂತ್ರಿಕ ತರಬೇತಿ ಸಂಸ್ಥೆಯಲ್ಲಿ ಸೆಂಟರ್ ಆಫ್ ಎಕ್ಸೆಲೆನ್ಸ್ ಸ್ಥಾಪಿಸಲು ಟೊಯೊಟಾ ಕಿರ್ಲೋಸ್ಕರ್ ಮೋಟಾರ್ ಸಂಸ್ಥೆ ಮತ್ತು ವಿಪ್ರೋ ಇಡಿ ಜೊತೆ ಒಪ್ಪಂದಕ್ಕೆ ಸಹಿ ಹಾಕಿದೆ. ಇದರಿಂದ ಸುಧಾರಿತ ಉತ್ಪಾದನಾ ತಂತ್ರಜ್ಞಾನಗಳಲ್ಲಿ ಭವಿಷ್ಯಕ್ಕೆ ಪೂರಕವಾದ ಸಾಮರ್ಥ್ಯಗಳನ್ನು ನಿರ್ಮಿಸಿ ಉದ್ಯಮ-ಶೈಕ್ಷಣಿಕ ಸಹಯೋಗವನ್ನು ಬಲಪಡಿಸುವ ಗುರಿಯನ್ನು ಹೊಂದಲಾಗಿದೆ. ಈ ಕುರಿತು ಮಾಹಿತಿ ನೀಡಿದ ಟೊಯೊಟಾ ಕಿರ್ಲೋಸ್ಕರ್ ಸಂಸ್ಥೆಯ ಮುಖ್ಯ ಕಾರ್ಯತಂತ್ರ ಅಧಿಕಾರಿ ಜಿ.ಶಂಕರ, ನುರಿತ ಪ್ರತಿಭೆಗಳನ್ನು ಪೋಷಿಸಲು ಮತ್ತು ಭಾರತದ ಉತ್ಪಾದನಾ ಪರಿಸರ ವ್ಯವಸ್ಥೆಯನ್ನು ಬಲಪಡಿಸಲು ಬದ್ಧರಾಗಿದ್ದೇವೆ. ಈ ಒಪ್ಪಂದ ಭವಿಷ್ಯಕ್ಕೆ ಸಿದ್ಧವಾಗಿರುವ ಪ್ರತಿಭೆಗಳನ್ನು ಪೋಷಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಹಾಗೂ ಸರ್ಕಾರದ ಸ್ಕಿಲ್ ಇಂಡಿಯಾ ಧ್ಯೇಯಕ್ಕೆ ಅರ್ಥಪೂರ್ಣವಾಗಿ ಕೊಡುಗೆ ನೀಡುತ್ತದೆ ಎಂದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>